# All India Radio: Bangalore
## National Bulletin In Kannada
## 03.05.2026 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**03.05.2026 1.10 p.m.**

**<><><><>**

ಮುಖ್ಯಾಂಶಗಳು

1. ನಾಳೆ ಪುದುಚೇರಿ ಕೇಂದ್ರಾಡಳಿತ ಪ್ರದೇಶ ಹಾಗೂ ಪಶ್ಚಿಮ ಬಂಗಾಳ, ಕೇರಳ, ತಮಿಳುನಾಡು, ಅಸ್ಸಾಂ ವಿಧಾನಸಭಾ ಚುನಾವಣೆಯ ಮತ ಎಣಿಕೆ
2. ಕರ್ನಾಟಕದ ದೊಡ್ಡಬಳ್ಳಾಪುರದಲ್ಲಿ ಇಂದು ನೂತನ ಇಎಸ್‌ಐಸಿ ಆಸ್ಪತ್ರೆ ಲೋಕಾರ್ಪಣೆಗೊಳಿಸಿದ ಕೇಂದ್ರ ಸಚಿವ ಡಾ.ಮನ್ಸುಖ್ ಮಾಂಡವೀಯಾ
3. 'ಶಾಂತಿಯ ಮೂಲಕ, ಭವಿಷ್ಯ ರೂಪಿಸೋಣ' ಎಂಬ ಧ್ಯೇಯದೊಂದಿಗೆ ಇಂದು ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನ ಆಚರಣೆ
4. ದೆಹಲಿಯ ವಿವೇಕ್ ವಿಹಾರ್ ಪ್ರದೇಶದ ಕಟ್ಟಡದಲ್ಲಿ ಬೆಂಕಿ ಅವಘಡ; ೯ ಮಂದಿ ಸಾವು; ಗಣ್ಯರಿಂದ ಸಂತಾಪ
5. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಸನ್ ರೈಸರ್ಸ್ ಹೈದರಾಬಾದ್ -ಕೊಲ್ಕತ್ತಾ ನೈಟ್ ರೈಡರ್ಸ್ ಹಾಗೂ ಗುಜರಾತ್ ಟೈಟನ್ಸ್ - ಪಂಜಾಬ್ ಕಿಂಗ್ಸ್ ಮುಖಾಮುಖಿ

<><><><>

ಪಶ್ಚಿಮ ಬಂಗಾಳ, ಕೇರಳ, ತಮಿಳುನಾಡು, ಅಸ್ಸಾಂ ಮತ್ತು ಪುದುಚೇರಿ ಕೇಂದ್ರಾಡಳಿತ ಪ್ರದೇಶಗಳಲ್ಲಿ ನಡೆದ ವಿಧಾನಸಭಾ ಚುನಾವಣೆಗಳ ಮತ ಎಣಿಕೆ ನಾಳೆ ನಡೆಯಲಿದೆ. ಪಶ್ಚಿಮ ಬಂಗಾಳದಲ್ಲಿ, ರಾಜ್ಯಾದ್ಯಂತ ೭೭ ಮತ ಎಣಿಕೆ ಕೇಂದ್ರಗಳಲ್ಲಿ ಎಲ್ಲಾ ಸಿದ್ಧತೆಗಳು ಪೂರ್ಣಗೊಂಡಿದ್ದು, ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳಲು ಬಹು-ಹಂತದ ಭದ್ರತೆಯನ್ನು ಒದಗಿಸಲಾಗಿದೆ ಎಂದು ಚುನಾವಣಾ ಅಧಿಕಾರಿಗಳು ತಿಳಿಸಿದ್ದಾರೆ. ತಮಿಳುನಾಡಿನಲ್ಲಿ, ಒಟ್ಟು ೧೦ ಸಾವಿರದ ೫೪೫ ಮತ ಎಣಿಕೆ ಸಿಬ್ಬಂದಿಯನ್ನು ಎಣಿಕೆ ಕರ್ತವ್ಯಕ್ಕಾಗಿ ನಿಯೋಜಿಸಲಾಗಿದೆ. ೪ ಸಾವಿರದ ೭೨೪ ಸೂಕ್ಷ್ಮ ವೀಕ್ಷಕರೊಂದಿಗೆ, ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಒಬ್ಬರು ಸೇರಿದಂತೆ ೨೩೪ ಎಣಿಕೆ ವೀಕ್ಷಕರು ಮತ ಎಣಿಕೆ ಕಾರ್ಯದ ಮೇಲ್ವಿಚಾರಣೆ ಮಾಡುತ್ತಾರೆ ಮತ್ತು ಆಯೋಗದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಚಿತಪಡಿಸಿಕೊಳ್ಳುತ್ತಾರೆ.

<><><><>

ಕೇಂದ್ರ ಕಾರ್ಮಿಕ, ಉದ್ಯೋಗ ಹಾಗೂ ಯುವಜನ ವ್ಯವಹಾರಗಳ ಸಚಿವ ಡಾ.ಮನ್ಸುಖ್ ಮಾಂಡವೀಯಾ ಇಂದು ಕರ್ನಾಟಕದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ೧೦೦ ಹಾಸಿಗೆ ಸಾಮರ್ಥ್ಯದ ನೂತನ ಇಎಸ್ಐಸಿ ಆಸ್ಪತ್ರೆಯನ್ನು ಲೋಕಾರ್ಪಣೆಗೊಳಿಸಿದರು. ಇದೇ ವೇಳೆ, ಬಳ್ಳಾರಿಯಲ್ಲಿ ನಿರ್ಮಾಣಗೊಳ್ಳಲಿರುವ ೧೦೦ ಹಾಸಿಗೆಗಳ ಇಎಸ್ಐಸಿ ಆಸ್ಪತ್ರೆಗೂ ಶಂಕುಸ್ಥಾಪನೆ ನೆರವೇರಿಸಿದರು. ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಅತಿ ಸಣ್ಣ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಸಂಸದ ಡಾ.ಕೆ.ಸುಧಾಕರ್, ಶಾಸಕ ಧೀರಜ್ ಮುನಿರಾಜು, ಮತ್ತಿತರ ಗಣ್ಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

<><><>

'ಶಾಂತಿಯ ಮೂಲಕ, ಭವಿಷ್ಯ ರೂಪಿಸೋಣ' ಎಂಬ ಧ್ಯೇಯದೊಂದಿಗೆ ವಿಶ್ವಾದ್ಯಂತ ಇಂದು 'ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನ' ಆಚರಿಸಲಾಗುತ್ತಿದೆ. ಇದು ಪತ್ರಿಕಾ ಸ್ವಾತಂತ್ರ್ಯವನ್ನು ಉತ್ತೇಜಿಸಲು ಮತ್ತು ಅದರ ಪರವಾದ ಉಪಕ್ರಮಗಳನ್ನು ಅಭಿವೃದ್ಧಿಪಡಿಸಲು, ಹಾಗೂ ಜಾಗತಿಕ ಮಟ್ಟದಲ್ಲಿ ಪತ್ರಿಕಾ ಸ್ವಾತಂತ್ರ್ಯದ ಸ್ಥಿತಿಯನ್ನು ಮೌಲ್ಯಮಾಪನ ಮಾಡಲು ಒಂದು ಮಹತ್ವದ ಸಂದರ್ಭವಾಗಿದೆ. ಈ ವರ್ಷದ ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವು, ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಪುನಃ ದೃಢಪಡಿಸಲು ಮತ್ತು ಪತ್ರಿಕೋದ್ಯಮ, ಕೃತಕ ಬುದ್ಧಿಮತ್ತೆ ಸೇರಿದಂತೆ ತಂತ್ರಜ್ಞಾನ ಹಾಗೂ ಮಾನವ ಹಕ್ಕುಗಳ ಕ್ಷೇತ್ರದವರನ್ನು ಭವಿಷ್ಯದ ಮಾಹಿತಿಯ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಪ್ರಾಯೋಗಿಕ ಮಾರ್ಗಗಳ ಸುತ್ತ ಒಗ್ಗೂಡಿಸಲು ಒಂದು ಪ್ರಮುಖ ವೇದಿಕೆ ಒದಗಿಸುತ್ತದೆ. ವಿಶ್ವಸಂಸ್ಥೆಯ ಡಿಸೆಂಬರ್ ೧೯೯೩ರ ಸಾಮಾನ್ಯ ಸಮ್ಮೇಳನದಲ್ಲಿ ಯುನೆಸ್ಕೊದ ಶಿಫಾರಸ್ಸಿನಂತೆ ಮೇ೩ ಅನ್ನು ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನವೆಂದು ಘೋಷಿಸಲಾಯಿತು. ಅಂದಿನಿಂದ ಮೇ ೩ ಅನ್ನು ವಿಂಡ್‌ಹೋಕ್ ಘೋಷಣೆಯ ವಾರ್ಷಿಕೋತ್ಸವವನ್ನಾಗಿ ವಿಶ್ವ ಪತ್ರಿಕಾ ಸ್ವಾತಂತ್ರ್ಯ ದಿನ ಎಂದು ಆಚರಿಸಲಾಗುತ್ತಿದೆ.

<><><>

ದೆಹಲಿಯ ವಿವೇಕ್ ವಿಹಾರ್ ಪ್ರದೇಶದ ಕಟ್ಟಡವೊಂದರಲ್ಲಿ ಇಂದು ಸಂಭವಿಸಿದ ಭಾರಿ ಬೆಂಕಿ ಅವಘಡದಲ್ಲಿ ೯ ಜನರು ಸಾವನ್ನಪ್ಪಿದ್ದಾರೆ. ಇಂದು ಮುಂಜಾನೆ ಬೆಂಕಿ ಅವಘಡದ ಬಗ್ಗೆ ಮಾಹಿತಿ ಬಂದ ನಂತರ ಹದಿನಾಲ್ಕು ಅಗ್ನಿಶಾಮಕ ದಳದ ವಾಹನಗಳು ಸ್ಥಳಕ್ಕೆ ಧಾವಿಸಿ ಬೆಂಕಿಯನ್ನು ನಂದಿಸಿವೆ ಎಂದು ದೆಹಲಿ ಅಗ್ನಿಶಾಮಕ ದಳ ಮಾಹಿತಿ ನೀಡಿದೆ. ಬೆಳಿಗ್ಗೆ ೬:೨೫ ರ ಹೊತ್ತಿಗೆ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದೆ ಎಂದು ಇಲಾಖೆ ತಿಳಿಸಿದೆ. ಮಾಧ್ಯಮಗಳೊಂದಿಗೆ

ಮಾತನಾಡಿದ ಅಗ್ನಿಶಾಮಕ ಅಧಿಕಾರಿ ಮುಖೇಶ್ ವರ್ಮಾ, ನಾಲ್ಕು ಅಂತಸ್ತಿನ ಕಟ್ಟಡದ ಕೆಲವು ಮಹಡಿಗಳಲ್ಲಿ ಬೆಂಕಿ ಕಾಣಿಸಿಕೊಂಡಿದೆ. ರಕ್ಷಣಾ ಮತ್ತು ಬೆಂಕಿ ನಂದಿಸುವ ಕಾರ್ಯಾಚರಣೆಯ ಸಮಯದಲ್ಲಿ, ಕಟ್ಟಡದಿಂದ ೧೫ ಜನರನ್ನು ರಕ್ಷಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಅವಘಡದಲ್ಲಿ ಮೃತಪಟ್ಟವರ ಬಗ್ಗೆ ದೆಹಲಿಯ ಲೆಫ್ಟಿನೆಂಟ್ ಗವರ್ನರ್ ತರಣ್‌ಜಿತ್ ಸಿಂಗ್ ಸಂಧು ಮತ್ತು ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮಲ್ಲಿ ಲೆಫ್ಟಿನೆಂಟ್ ಗವರ್ನರ್ ತರಣ್‌ಜಿತ್ ಸಿಂಗ್ ಸಂಧು, ದುರಂತದಲ್ಲಿ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ.  ಗಾಯಾಳುಗಳು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಅವರು ಹಾರೈಸಿದ್ದಾರೆ. ಗಾಯಗೊಂಡವರಿಗೆ ಅಗತ್ಯವಿರುವ ಎಲ್ಲಾ ವೈದ್ಯಕೀಯ ನೆರವು ಒದಗಿಸುವುದರ ಜೊತೆಗೆ, ಸಂತ್ರಸ್ತರಿಗೆ ತಕ್ಷಣದ ಪರಿಹಾರ ಮತ್ತು ಬೆಂಬಲವನ್ನು ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಈ ಅವಘಡ ಅತ್ಯಂತ ದುರಂತ ಎಂದು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಹೇಳಿದ್ದಾರೆ. ಪರಿಸ್ಥಿತಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಾಗುತ್ತಿದೆ ಮತ್ತು ಸಂತ್ರಸ್ತರಿಗೆ ಸಾಧ್ಯವಿರುವ ಎಲ್ಲ ಸಹಾಯವನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ.

<><><>

ಪದವಿಪೂರ್ವ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ ನೀಟ್-ಯುಜಿ ದೇಶಾದ್ಯಂತ ಇಂದು ನಡೆಯಲಿದೆ. ಈ ಪರೀಕ್ಷೆ ಮಧ್ಯಾಹ್ನ ೨ ಗಂಟೆಗೆ ಪ್ರಾರಂಭವಾಗಿ ಸಂಜೆ ೫ ಗಂಟೆಗೆ ಕೊನೆಗೊಳ್ಳಲಿದೆ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಮತ್ತು ಶಿಕ್ಷಣ ಸಚಿವಾಲಯದ ಅನುಮೋದನೆಯೊಂದಿಗೆ ಪದವಿಪೂರ್ವ ವೈದ್ಯಕೀಯ ಶಿಕ್ಷಣ ಪ್ರವೇಶಕ್ಕಾಗಿ ೨೦೧೯ ರಿಂದ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯು ನೀಟ್-ಯುಜಿ ಪರೀಕ್ಷೆಯನ್ನು ನಡೆಸುತ್ತಿದೆ. ಅಭ್ಯರ್ಥಿಗಳಿಗೆ ಪರೀಕ್ಷಾ ಸಂಸ್ಥೆ ನಿರ್ದಿಷ್ಟ ಮಾರ್ಗಸೂಚಿಗಳನ್ನು ನೀಡಿದೆ. ಅಭ್ಯರ್ಥಿಗಳು ತಮ್ಮ ಪ್ರವೇಶ ಪತ್ರಗಳ ಜೊತೆಗೆ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್ ಅಥವಾ ಪಡಿತರ ಚೀಟಿಯಂತಹ ಒಂದು ಮೂಲ ಫೋಟೋ ಗುರುತಿನ ಪುರಾವೆಯನ್ನು ಹೊಂದಿರಬೇಕು.

<><><>

ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ ಯಲ್ಲಿರುವ ಭಾರತೀಯ ವಿದ್ಯಾರ್ಥಿಗಳು ಇಂದು ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ-ನೀಟ್-ಯುಜಿ ೨೦೨೫ ಅನ್ನು ಬರೆಯುತ್ತಿದ್ದು,

ದುಬೈ ಮತ್ತು ಶಾರ್ಜಾ ಎರಡರಲ್ಲೂ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿದ್ದಾರೆ. ಈಗಾಗಲೇ ಮಧ್ಯಾಹ್ನ ೧೨:೩೦ ರಿಂದ ಪರೀಕ್ಷೆ ಆರಂಭವಗಿದ್ದು, ಮಧ್ಯಾಹ್ನ ೩:೩೦ ರವರೆಗೆ ನಡೆಯಲಿದೆ.

<><><>

ಭಾರತ-ಕಾಂಬೋಡಿಯಾ ದ್ವಿಪಕ್ಷೀಯ ಸಮರಾಭ್ಯಾಸ CINBAX-II ನ ಎರಡನೇ ಆವೃತ್ತಿಗಾಗಿ ಭಾರತೀಯ ಸೇನಾ ತುಕಡಿಯು ಕಾಂಬೋಡಿಯಾಕ್ಕೆ ತೆರಳಿದೆ. ಸಾಮಾಜಿಕ ಮಾಧ್ಯಮದಲ್ಲಿ ಭಾರತೀಯ ಸೇನೆಯ ಸಾರ್ವಜನಿಕ ಮಾಹಿತಿಯ ಹೆಚ್ಚುವರಿ ನಿರ್ದೇಶನಾಲಯ. ನಾಳೆಯಿಂದ ಇದೇ ೧೭ ರವರೆಗೆ ಟೆಕೊ ಸೆನ್ ಫ್ನೋಮ್ ಥಾಮ್ ಮ್ರಿಯಾಸ್ ಪ್ರೊವ್ ರಾಯಲ್ ಕಾಂಬೋಡಿಯನ್ ವಾಯುಪಡೆ ತರಬೇತಿ ಕೇಂದ್ರದಲ್ಲಿ ಸಮರಾಭ್ಯಸವನ್ನು ನಡೆಸಲು ನಿರ್ಧರಿಸಲಾಗಿದೆ ಎಂದು ತಿಳಿಸಿದೆ.

<><><>

ಭಾರತವು ತನ್ನ ಶುದ್ಧ ಇಂಧನ ಪ್ರಯಾಣದಲ್ಲಿ ಮಹತ್ವದ ಮೈಲಿಗಲ್ಲು ಸಾಧಿಸಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸಚಿವರು, ಪ್ರಸ್ತುತ ೪೫ ಲಕ್ಷ ಮನೆಗಳು ಸೌರಶಕ್ತಿಯನ್ನು ಬಳಸಿಕೊಂಡಿವೆ. ಈ ಬೆಳವಣಿಗೆಯ ಆಂದೋಲನವು, ದೇಶಾದ್ಯಂತ ಸೌರಶಕ್ತಿಯ ತ್ವರಿತ ಅಳವಡಿಕೆಯನ್ನು ಪ್ರತಿಬಿಂಬಿಸುತ್ತದೆ ಎಂದು ತಿಳಿಸಿದ್ದಾರೆ. ಪ್ರಧಾನ ಮಂತ್ರಿ ಸೂರ್ಯ ಘರ್ ಮುಫ್ತ್ ಬಿಜ್ಲಿ ಯೋಜನೆಯಡಿಯಲ್ಲಿ, ಕಳೆದ ತಿಂಗಳಲ್ಲಿ ದಾಖಲೆಯ ೩.೧೧ ಲಕ್ಷ ಮನೆಗಳು ಪ್ರಯೋಜನ ಪಡೆದಿವೆ. ಗುಜರಾತ್ ಮತ್ತು ಮಹಾರಾಷ್ಟ್ರದ ನಂತರ ೫ ಲಕ್ಷ ಸೌರ ಮೇಲ್ಛಾವಣಿ ಸ್ಥಾಪನೆಗಳನ್ನು ಮೀರಿದ ಮೂರನೇ ರಾಜ್ಯ ಉತ್ತರ ಪ್ರದೇಶವಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><>

ಪಶ್ಚಿಮ ಏಷ್ಯಾ ಸಂಘರ್ಷದ ನಡುವೆ ಜೂನ್‌ನಲ್ಲಿ ತೈಲ ಉತ್ಪಾದನಾ ಗುರಿಗಳನ್ನು ಹೆಚ್ಚಿಸಲು ಪೆಟ್ರೋಲಿಯಂ ರಫ್ತು ಮಾಡುವ ದೇಶಗಳ ಸಂಘಟನೆ - ಒಪೆಕ್ ಪ್ಲಸ್ ದೇಶಗಳು ತಾತ್ವಿಕವಾಗಿ ಒಪ್ಪಿಕೊಂಡಿವೆ. ಮುಂದಿನ ತಿಂಗಳು ದಿನಕ್ಕೆ ಸುಮಾರು ೧ ಲಕ್ಷ ೮೮ ಸಾವಿರದ ಬ್ಯಾರೆಲ್‌ಗಳಷ್ಟು ತೈಲ ಉತ್ಪಾದನಾ ಗುರಿಯನ್ನು ಹೆಚ್ಚಿಸಲು ಏಳು ಒಪೆಕ್ ಪ್ಲಸ್ ದೇಶಗಳು ಒಪ್ಪಿಗೆ ನೀಡಿವೆ ಎಂದು ವರದಿಯಾಗಿದೆ. ಭೌಗೋಳಿಕ ರಾಜಕೀಯ ಬಿಕ್ಕಟ್ಟು ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್-ಯುಎಇ ಗುಂಪಿನಿಂದ ನಿರ್ಗಮಿಸುತ್ತಿರುವ ಮಧ್ಯೆ ಇದು ಸತತ ಮೂರನೇ ಮಾಸಿಕ ಹೆಚ್ಚಳವಾಗಿದೆ. ಯುಎಇ ನಿರ್ಗಮಿಸುವುದರೊಂದಿಗೆ, ಒಪೆಕ್ ಪ್ಲಸ್, ಇರಾನ್ ಸೇರಿದಂತೆ ೨೧ ಸದಸ್ಯರನ್ನು ಒಳಗೊಂಡಿದೆ. ಕಳೆದ ವಾರ, ಯುಎಇ ಒಪೆಕ್ ಮತ್ತು ಒಪೆಕ್ ಪ್ಲಸ್ ತೈಲ ಪೂರೈಕೆ

ಸರಪಳಿಗಳನ್ನು ತೆರೆಯುವುದಾಗಿ ಘೋಷಿಸಿತ್ತು. ಹಾರ್ಮುಜ್ ಜಲಸಂಧಿಯ ಮುಚ್ಚುವಿಕೆಯಿಂದಾಗಿ ಪರ್ಷಿಯನ್ ಕೊಲ್ಲಿ ರಾಷ್ಟ್ರಗಳು ತಮ್ಮ ರಫ್ತಿಗೆ ಭಾರಿ ಹೊಡೆತ ನೀಡುತ್ತಿರುವ ಸಮಯದಲ್ಲಿ ಯುಎಇ ನಿರ್ಗಮನವು ತೈಲ ಪೂರೈಕೆ ಸರಪಳಿ ದುರ್ಬಲಗೊಳಿಸುವ ನಿರೀಕ್ಷೆಯಿದೆ.

<><><><>

೧೮ ಭಾರತೀಯರು ಸೇರಿದಂತೆ ೨೦ ಸಿಬ್ಬಂದಿಗಳೊಂದಿಗೆ ೪೬ ಸಾವಿರ ೩೧೩ ಮೆಟ್ರಿಕ್ ಟನ್ ಎಲ್‌ಪಿಜಿಯನ್ನು ಹೊತ್ತ ಮಾರ್ಷಲ್ ದ್ವೀಪದ ಧ್ವಜ ಹೊತ್ತ ಎಲ್‌ಪಿಜಿ ವಾಹಕ ಎಂಟಿ ಸರ್ವ್ ಶಕ್ತಿ, ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿದೆ.

<><><><>

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ಹೈದರಾಬಾದ್‌ನ ರಾಜೀವ್ ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಮತ್ತು ಕೊಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಅಹ್ಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಇಂದು ಸಂಜೆ ೭.೩೦ ಕ್ಕೆ ಆರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಸೆಣಸಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>